ಶಾಸನ ರಚನಾ ಕಾರ್ಯಕಲಾಪಗಳು

೧೯೮೫ನೇ ಇಸವಿಯ ಕರ್ನಾಟಕ ಸಾರ್ವಜನಿಕ ಹಣಕಾಸು (ಬಾಕಿಗಳ ವಸೂಲಾತಿ) (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೫ನೇ ಇಸವಿಯ ಕರ್ನಾಟಕ ಸಾರ್ವಜನಿಕ ಹಣಕಾಸು (ಬಾಕಿಗಳ ವಸೂಲಾತಿ) (ತಿದ್ದುಪಡಿ) ವಿಧೇಯಕವನ್ನು, ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ.

೧೯೮೫ನೇ ಇಸವಿಯ ಕರ್ನಾಟಕ ಸಾರ್ವಜನಿಕ ಹಣಕಾಸು (ಬಾಕಿಗಳ ವಸೂಲಾತಿ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ರಾಮಕೃಷ್ಣ ಹೆಗಡೆ.—ಮಾನ್ಯ ಅಧ್ಯಕ್ಷರೇ, ೧೯೮೫ನೇ ಇಸವಿಯ ಕರ್ನಾಟಕ ಸಾರ್ವಜನಿಕ ಹಣಕಾಸು (ಬಾಕಿಗಳ ವಸೂಲಾತಿ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

* ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

ನಿಯಂವು ೫೯ರ ಮೇರೆಗೆ ನಿಲುವಳಿಸೂಚನೆ.

ಕರ್ನಾಟಕ ರಾಜ್ಯದಲ್ಲಿ ತಾಲ್ಲೂಕ್ ಸಲಹಾ ಸಮಿತಿಗಳನ್ನು ರಚನೆ ಮಾಡಿರುವ ಬಗ್ಗೆ.

ಶ್ರೀ ಎಸ್. ಬಂಗಾರಪ್ಪ (ವಿರೋಧ ಪಕ್ಷದ ನಾಯಕರು).—ಮಾನ್ಯ ಅಧ್ಯಕ್ಷರೇ, ನಿಯಮ ೫೯ರ ಪ್ರಕಾರ ನಾವು ತಮಗೆ ಒಂದು ನಿಲುವಳಿ ಸೂಚನೆಯನ್ನು ಕಳುಹಿಸಿಕೊಟ್ಟಿದ್ದೇವೆ. ಇದಕ್ಕೆ ಕಾರಣ ವೇನೆಂದರೆ, ಸರ್ಕಾರದವರು ಕರ್ನಾಟಕ ರಾಜ್ಯದಲ್ಲಿರುವಂತಹ ಎಲ್ಲ ತಾಲ್ಲೂಕುಗಳಿಗೂ ಸಲಹಾ ಸಮಿತಿ ಗಳನ್ನು ರಚನೆ ಮಾಡುತ್ತಿದೆ. ಈ ಹಿಂದೆ ತಾಲ್ಲೂಕ್ ಅಭಿವೃದ್ಧಿ ಮಂಡಲಿ ಸದಸ್ಯರುಗಳು ಏನಿರು ತ್ತಿದ್ದರು, ಆ ಒಂದು ಜಾಗದಲ್ಲಿ ಈಗ ಸಲಹಾ ಸಮಿತಿಗಳನ್ನು ನೇಮಕ ಮಾಡುತ್ತಿದ್ದಾರೆ. ಇದೇ ವಿಚಾರ ಕಳೆದ ಮಾರ್ಚ ತಿಂಗಳಲ್ಲಿ ಇಲ್ಲಿ ಪ್ರಸ್ತಾಪಕ್ಕೆ ಬಂದಾಗ ಸರ್ಕಾರದವರು ಸಮಿತಿಗಳನ್ನು ನೇಮಕ ಮಾಡುವಾಗ ಸಾಕಷ್ಟು ಪ್ರಾತಿನಿಧ್ಯ ಕೊಡುವುದಾಗಿ ಹೇಳಿದ್ದರು. ಆದರೆ ಆ ಸಮಯದಲ್ಲಿ ಕರ್ನಾಟಕ ರಾಜ್ಯ ಮಂಡಲ್ ಪಂಚಾಯತ್ ಮತ್ತು ಜಿಲ್ಲಾ ಪರಿಷತ್ ಮಂಸೂದೆಗೆ ರಾಷ್ಟ್ರಪತಿಯವರ ಅಂಗೀಕಾರ ಇನ್ನೂ ದೊರಕಿರಲಿಲ್ಲ. ಈ ಕಾರಣದಿಂದ ಸಲಹಾ ಸಮಿತಿಗಳನ್ನು ನೇಮಕ ಮಾಡುವಲ್ಲಿ ನಮ್ಮ ಅಭ್ಯಂತರವೇನೂ ಇಲ್ಲಹೆಂದು ನಾವು ತಿಳಿಸಿದ್ದೆವು. ಆದರೆ ಈಗ ಈ ಮಸೂದೆಗೆ ರಾಷ್ಟ್ರಪತಿ ಯವರ ಅಂಗೀಕಾರ ದೊರಕಿದೆ. ಆದ್ದರಿಂದ ಈಗ ಸರ್ಕಾರಕ್ಕೆ ಇರುವ ಒಂದೇ ಒಂದು ದಾರಿ ಎಂದರೆ, ಮಂಡಲ್ ಪಂಚಾಯತ್ ಹಾಗೂ ಜಿಲ್ಲಾ ಪರಿಷತ್‌ಗಳಿಗೆ ಚುನಾವಣೆ ನಡೆಸಲು ದಿನಾಂಕವನ್ನು ಗೊತ್ತ ಮಾಡಿ ಅದಕ್ಕೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳುವುದು. ಇದಕ್ಕಾಗಿ ಕ್ಷೇತ್ರಗಳ ಪುನರ್ ವಿಂಗಡಣೆ ಕೆಲಸ ಮಾಡಬೇಕಾಗುತ್ತದೆ. ಈ ಕೆಲಸ ಮಾಡುವಾಗಲೂ ಸಹ ವಿರೋಧ ಪಕ್ಷಗಳ ಸಲಹೆಗಳನ್ನು ಪಡೆದುಕೊಳ್ಳಬೇಕೆಂದು ನಾವು ಈ ಹಿಂದೆಯೇ ಸರ್ಕಾರಕ್ಕೆ ಸಲಹೆ ಮಾಡಿದ್ದೆವು. ನಮ್ಮ ಸಲಹೆಗಳನ್ನು ಸರ್ಕಾರದವರು ಒಪ್ಪಿಕೊಂಡು ವಿರೋಧ ಪಕ್ಷಗಳ ಅಭಿಪ್ರಾಯ ಪಡೆದುಕೊಂಡೇ ಈ ಕೆಲಸ ಮಾಡುವು ದಾಗಿ ಈ ಸದನದಲ್ಲಿ ಹೇಳಿದ್ದರು. ಆದರೆ ಈಗಿನ ಪರಿಸ್ಥಿತಿಯನ್ನು ನೋಡಿದರೆ ಈ ಕ್ಷೇತ್ರಗಳ ಪುನರ್ ವಿಂಗಡಣೆಯ ಬಗ್ಗೆ ಎಲ್ಲಾ ವಿರೋಧ ಪಕ್ಷಗಳ ಸಲಹೆಗಳನ್ನು ಪಡೆದುಕೊಳ್ಳದೆ ಏಕಪಕ್ಷೀಯವಾಗಿ ಮಾಡುತ್ತಿರುವುದು ನಮಗೆ ಕಂಡುಬಂದಿದೆ ಇದರ ಜೊತೆಗೆ, ಈ ಮಂಸೂದೆಗೆ ರಾಷ್ಟ್ರಪತಿಯವರ ಅಂಗೀಕಾರ ದೊರಕಿರುವುದರಿಂದ ಸಲಹಾ ಸಮಿತಿಗಳ ಅಗತ್ಯವಾದರೂ ಏನು ಎಂಬ ಪ್ರಶ್ನೆಯೂ ಸಹ

* Annexure.